

ದಿನಾಂಕ:16-02-2024 ರಂದು ಮಾನ್ಯ ಮುಖ್ಯಮಂತ್ರಿಗಳು ಬಜೆಟ್ ಮಂಡಿಸುವ ಪೂರ್ವದಲ್ಲಿ ಸರ್ಕಾರದ ಪ್ರತಿನಿಧಿಯಾದ ಸಣ್ಣ ನೀರಾವರಿ ಹಾಗೂ ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ ಸಚಿವರು ಹಾಗೂ ವಿಧಾನಪರಿಷತ್ತಿನ ನಾಯಕರಾದ ಎನ್. ಎಸ್. ಬೋಸ್ ರಾಜ್ ಅವರು ಸಭಾಪತಿ ಶ್ರೀ ಬಸವರಾಜ್ ಹೊರಟ್ಟಿ ಅವರಿಗೆ 2024 -25 ನೇ ಸಾಲಿನ ಬಜೆಟ್ ಪ್ರತಿಯನ್ನು ಸಂಪ್ರದಾಯದಂತೆ ನೀಡಿ ವಿಧಾನಸಭೆಯಲ್ಲಿ ಮಂಡಿಸಲು ಒಪ್ಪಿಗೆ ಪಡೆದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಶ್ರೀ ಕೋಟ ಶ್ರೀನಿವಾಸ್ ಪೂಜಾರಿ, ವಿ.ಪ ಸದಸ್ಯರಾದ ಶ್ರೀಮತಿ ತೇಜಸ್ವಿನಿ ಗೌಡ ಸೇರಿದಂತೆ ವಿಧಾನ ಪರಿಷತ್ತಿನ ಹಿರಿಯ ಅಧಿಕಾರಿ ವರ್ಗದವರು ಮತ್ತು ಸಿಬ್ಬಂದಿಯವರು ಹಾಗೂ ಮುಂತಾದವರು ಉಪಸ್ಥಿತರಿದ್ದರು.